**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ರವರ ನ್ಯಾಯಾಲಯ, ತರೀಕೆರೆ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 269/2021**

ಪಿರ್ಯಾದಿ: ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

- ವಿರುದ್ಧ -

ಆರೋಪಿ/ತರುಃ

**1**. ಶ್ರೀ ಪ್ರಭಾಕರ ಬಿನ್ ಶ್ರೀ ಕೆ.ಎನ್.ಬಸವರಾಜಪ್ಪ, 40 ವರ್ಷ, ವಾಸಃ ಕರುಕುಚ್ಚಿ ಗ್ರಾಮ, ಲಕ್ಕವಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು.

**2**. ಶ್ರೀ ಉಮ್ಲಾನಾಯ್ಕ ಬಿನ್ ಶ್ರೀ ಗಂಗಾನಾಯ್ಕ, 40 ವರ್ಷ, ವಾಸಃ ಕರುಕುಚ್ಚಿ ಗ್ರಾಮ, ಲಕ್ಕವಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು.

****

**ದೋಷಾರೋಪಣೆ**

ಶ್ರೀ ಉರ್ಮಿಳ.ವಿ., ಬಿ.ಎ., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿತರಾದ ನಿಮ್ಮಗಳ ವಿರುದ್ಧ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 03.09.2020 ರಂದು ರಾತ್ರಿ 10.50 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನ ಬಾವಿಕೆರೆ ಗ್ರಾಮದ ಬಸ್ ನಿಲ್ದಾಣದ ಹತ್ತಿರ ಆರೋಪಿತರಾದ ನೀವು ಯಾವುದೇ ಪರವಾನಿಗೆ ಇಲ್ಲದೆ ಅಕ್ರಮವಾಗಿ ಮರಳನ್ನು ಭಧ್ರಾ ಹೊಳೆಯಿಂದ ತೆಗೆದು ಮಾರಾಟ ಮಾಡುವ ಉದ್ದೇಶದಿಂದ ಟ್ರಾಕ್ಟರ್ ನಲ್ಲಿ ಮರಳನ್ನು ತುಂಬಿಸಿ ಕಳ್ಳತನದಿಂದ ಸಾಗಾಟ ಮಾಡಿ ಸರ್ಕಾರದ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡಿದ್ದು, ಆದಕಾರಣ 1 ಮತ್ತು 2 ನೇ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 379 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ 22.05.2024

ಸಹಿ/-
**(ಶ್ರೀಮತಿ ಉರ್ಮಿಳ.ವಿ)**
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ತರೀಕೆರೆ.